# ಐಐಟಿ ರೂರ್ಕಿ ಅಂತಾರಾಷ್ಟ್ರೀಯ ಸಮಾವೇಶದಲ್ಲಿ ಪ್ರಬಂಧ ಮಂಡನೆ






ಹಳಿಯಾಳ: ಭಾರತೀಯ ತಂತ್ರಜ್ಞಾನ ಸಂಸ್ಥೆ ರೂರ್ಕಿ ಆಯೋಜಿಸಿರುವ ನೀರಿನ ಕುರಿತಾದ ಅಂತಾರಾಷ್ಟ್ರೀಯ ಸಮಾವೇಶದಲ್ಲಿ ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದ ಸಿವಿಲ್ ವಿಭಾಗದ ಪ್ರಾಧ್ಯಾಪಕಿ ಪ್ರೊ. ಸೀಮಾ ಬಸರಿಕಟ್ಟಿ ಮತ್ತು ವಿದ್ಯಾರ್ಥಿಗಳಾದ ಪರಶುರಾಮ, ಸಂತೋಷ್, ಹುಜಫ್ ತಮ್ಮ ಸಂಶೋಧನಾ ಪ್ರಬಂಧವನ್ನು ಮಂಡಿಸಲಿದ್ದಾರೆ.

ನವೆಂಬರ್ 30ರಂದು ಜರಗಲಿರುವ ಈ ಸಮಾವೇಶದಲ್ಲಿ ಕಾಗದ ಕಾರ್ಖಾನೆಯಿಂದ ಹೊರಬರುವ ಕಲುಷಿತ ನೀರಿನ ವಿಶ್ಲೇಷಣೆ ನಡೆಸಿ, ಇದರಿಂದ ಪರಿಸರದ ಮೇಲಾಗುವ ದುಷ್ಪರಿಣಾಮದ ಕುರಿತಾಗಿ ತಮ್ಮ ಪ್ರಬಂಧವನ್ನು ಮಂಡಿಸಲಿದ್ದಾರೆ.

ಮಹಾವಿದ್ಯಾಲಯದ ಪ್ರಾಧ್ಯಾಪಕಿ ಮತ್ತು ವಿದ್ಯಾರ್ಥಿಗಳು, ಐಐಟಿ ರೂರ್ಕಿ ಆಯೋಜಿಸಿರುವ ಅಂತಾರಾಷ್ಟ್ರೀಯ ಸಮಾವೇಶದಲ್ಲಿ ಸಂಶೋಧನಾ ಪ್ರಬಂಧವನ್ನು ಮಂಡಿಸುತ್ತಿರುವುದಕ್ಕೆ ಆಡಳಿತ ಮಂಡಳಿ ಅಧ್ಯಕ್ಷ ಪ್ರಶಾಂತ ಕುಲಕರ್ಣಿ, ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಹರ್ಷ ವ್ಯಕ್ತಪಡಿಸಿದ್ದಾರೆ. ವಿಭಾಗ ಮುಖ್ಯಸ್ಥ ಪ್ರೊ. ಹರ್ಷ ಜಾದವ್ ಮತ್ತು ಸಿಬ್ಬಂದಿಗಳು ಶುಭಹಾರೈಸಿದ್ದಾರೆ.


Powered By KHUSHIHOST ® | License - ePaperCloud.com

# ಅಂತಾರಾಷ್ಟ್ರೀಯ ಸಮಾವೇಶದಲ್ಲಿ ಪ್ರಬಂಧ ಮಂಡನೆ



ಹಳಿಯಾಳ: ಭಾರತೀಯ ತಂತ್ರಜ್ಞಾನ ಸಂಸ್ಥೆ ರೂರ್ಕಿ ಆಯೋಜಿಸಿರುವ ನೀರಿನ ಕುರಿತಾದ ಅಂತಾರಾಷ್ಟ್ರೀಯ ಸಮಾವೇಶದಲ್ಲಿ ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದ ಸಿವಿಲ್ ವಿಭಾಗದ ಪ್ರಾಧ್ಯಾಪಕಿ ಪ್ರೊ. ಸೀಮಾ ಬಸರಿಕಟ್ಟಿ ಮತ್ತು ವಿದ್ಯಾರ್ಥಿಗಳಾದ ಪರಶುರಾಮ, ಸಂತೋಷ್, ಹುಜಫ್ ತಮ್ಮ ಸಂಶೋಧನಾ ಪ್ರಬಂಧವನ್ನು ಮಂಡಿಸಲಿದ್ದಾರೆ. ನವಂಬರ್ 30ರಂದು ಜರಗಲಿರುವ ಈ ಸಮಾವೇಶದಲ್ಲಿ ಕಾಗದ ಕಾರ್ಖಾನೆಯಿಂದ ಹೊರಬರುವ ಕಲುಷಿತ ನೀರಿನ ವಿಶ್ಲೇಷಣೆ ನಡೆಸಿ, ಇದರಿಂದ ಪರಿಸರದ ಮೇಲಾಗುವ ದುಷ್ಪರಿಣಾಮದ ಕುರಿತಾಗಿ ತಮ್ಮ ಪ್ರಬಂಧವನ್ನು ಮಂಡಿಸಲಿದ್ದಾರೆ. ಮಹಾವಿದ್ಯಾಲಯದ ಪ್ರಾಧ್ಯಾಪಕಿ ಮತ್ತು ವಿದ್ಯಾರ್ಥಿಗಳು, ಐಐಟಿ ರೂರ್ಕಿ ಆಯೋಜಿಸಿರುವ ಅಂತಾರಾಷ್ಟ್ರೀಯ ಸಮಾವೇಶದಲ್ಲಿ ಸಂಶೋಧನಾ ಪ್ರಬಂಧವನ್ನು ಮಂಡಿಸುತ್ತಿರುವುದಕ್ಕೆ ಆಡಳಿತ ಮಂಡಳಿ ಅಧ್ಯಕ್ಷ ಪ್ರಶಾಂತ ಕುಲಕರ್ಣಿ, ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಹರ್ಷ ವ್ಯಕ್ತಪಡಿಸಿದ್ದಾರೆ . ವಿಭಾಗ ಮುಖ್ಯಸ್ಥ ಪ್ರೊ. ಹರ್ಷ ಜಾದವ್ ಮತ್ತು ಸಿಬ್ಬಂದಿಗಳು ಶುಭಹಾರೈಸಿದ್ದಾರೆ.

November 15, 2025 | Page No: 5 | epaper.halliesandesh.com
Powered By KHUSHIHOST ®| License - ePaperCloud.com